All India Radio: Bangalore
Regional Bulletin In Kannada
11.02.2025 / 2.30 p.m.
ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

ಮುಖ್ಯಾಂಶಗಳು

- ಬೆಂಗಳೂರಿನಲ್ಲಿ ಇಂದಿನಿಂದ ಜಾಗತಿಕ ಬಂಡವಾಳ ಹೂಡಿಕೆದಾರರ ಸಮಾವೇಶ
- ಹಲವು ಉದ್ಯಮಿಗಳಿಂದ ಇಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಭೇಟಿ ; ರಾಜ್ಯದಲ್ಲಿ ಬಂಡವಾಳ ಹೂಡಿಕೆ ಕುರಿತಂತೆ ಚರ್ಚೆ
- ಏರೋ ಇಂಡಿಯಾದಲ್ಲಿ ಇಂದು ರಕ್ಷಣಾ ಸಚಿವರ ಸಮ್ಮೇಳನ ; ಹಲವು ಯುದ್ಧ ವಿಮಾನಗಳಿಂದ ಶಕ್ತಿ ಪ್ರದರ್ಶನ
- ಬೆಂಗಳೂರು-ಬೆಳಗಾವಿ ನಡುವೆ ಶೀಘ್ರವೇ ವಂದೇ ಭಾರತ್ ರೈಲು ಸಂಚಾರ - ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ
- ಬೆಂಬಲ ಬೆಲೆಯಲ್ಲಿ ಶೇಂಗಾ ಖರೀದಿ ಅವಧಿ ವಿಸ್ತರಿಸಿ ಸರ್ಕಾರ ಆದೇಶ

<><><><>

ಬೆಂಗಳೂರು ಅರಮನೆ ಮೈದಾನದಲ್ಲಿ ಇಂದಿನಿಂದ ಇದೇ ೧೪ರವರೆಗೆ ಇನ್ವೆಸ್ಟ್ ಕರ್ನಾಟಕ ೨೦೨೫ ಜಾಗತಿಕ ಬಂಡವಾಳ ಹೂಡಿಕೆದಾರರ ಸಮಾವೇಶ ನಡೆಯಲಿದೆ. ರಕ್ಷಣಾ ಸಚಿವ ರಾಜನಾಥ್ ಸಿಂಗ್ ಸಮಾವೇಶಕ್ಕೆ ಚಾಲನೆ ನೀಡಲಿದ್ದಾರೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಅಧ್ಯಕ್ಷತೆಯಲ್ಲಿ ನಡೆಯಲಿರುವ ಕಾರ್ಯಕ್ರಮದಲ್ಲಿ ಕೇಂದ್ರ ಸಚಿವರಾದ ಪ್ರಲ್ಹಾದ್ ಜೋಶಿ, ಎಚ್.ಡಿ.ಕುಮಾರಸ್ವಾಮಿ, ಶೋಭಾ ಕರಂದ್ಲಾಜೆ ಹಾಗೂ ವಿ.ಸೋಮಣ್ಣ ಸೇರಿದಂತೆ ಹಲವು ಗಣ್ಯರು ಭಾಗವಹಿಸಲಿದ್ದಾರೆ. ಮಾಹಿತಿ ಮತ್ತು ಜೈವಿಕ ತಂತ್ರಜ್ಞಾನ, ಎಲೆಕ್ಟ್ರಾನಿಕ್ಸ್ ನವೋದ್ಯಮ ಏರೋಸ್ಪೇಸ್ ಮತ್ತು ರಕ್ಷಣೆ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ವಿಶ್ವದಾದ್ಯಂತ ಪ್ರಖ್ಯಾತಿಯ ಛಾಪು ಮೂಡಿಸಿರುವ ಕರ್ನಾಟಕ, ಪ್ರಗತಿಯ ಮರುಕಲ್ಪನೆ ಧ್ಯೇಯದ ಈ ಸಮಾವೇಶದ ಮೂಲಕ ವಿಶ್ವದಾದ್ಯಂತ ಹೂಡಿಕೆದಾರರನ್ನು ರಾಜ್ಯದತ್ತ ಸೆಳೆಯಲು ಸಜ್ಜಾಗಿದೆ. ೧೯ ದೇಶಗಳ ಪ್ರಮುಖ ಉದ್ಯಮಿಗಳು ಭಾಗವಹಿಸುವ ಮೂಲಕ ಸುಮಾರು ೧೦ ಲಕ್ಷ ಕೋಟಿ ಬಂಡವಾಳ ಹೂಡಿಕೆಯ ನಿರೀಕ್ಷೆಯಿದೆ. ೬೦ಕ್ಕೂ ಹೆಚ್ಚು ಕಂಪನಿಗಳು ಅತ್ಯಾಧುನಿಕ ತಂತ್ರಜ್ಞಾನ ಪ್ರದರ್ಶನಕ್ಕೆ ಸಜ್ಜಾಗಿವೆ.

<><><><>

ಮುಖ್ಯಮಂತ್ರಿ ಸಿದ್ದರಾಮಯ್ಯ ಬೆಂಗಳೂರಿನಲ್ಲಿಂದು ಅವರ ಕಾವೇರಿ ನಿವಾಸದಲ್ಲಿ ದೇಶ ವಿದೇಶಗಳ ಹಲವು ಉದ್ಯಮಿಗಳನ್ನು ಭೇಟಿಯಾಗಿ ರಾಜ್ಯದಲ್ಲಿ ಬಂಡವಾಳ ಹೂಡಿಕೆ ಕುರಿತಂತೆ ಚರ್ಚೆ ನಡೆಸಿದ್ದಾರೆ. ಹೀರೋ ಫ್ಯೂಚರ್ ಎನರ್ಜೀಸ್ ಕಂಪನಿಯ ಮುಖ್ಯಸ್ಥ ರಾಹುಲ್ ಮಂಜಲ್ ಅವರೊಂದಿಗೆ ಚರ್ಚೆ ನಡೆಸಿದ ಮುಖ್ಯಮಂತ್ರಿ, ಜಾಗತಿಕ ಹೂಡಿಕೆದಾರರ ಸಮಾವೇಶದಲ್ಲಿ ತಮ್ಮ ಕಂಪನಿಯ ಆದ್ಯತೆ, ಉದ್ಯೋಗ ಸೃಷ್ಟಿ ಸೇರಿದಂತೆ ಹಲವು ವಿಷಯಗಳ ಕುರಿತಂತೆ ಮಾಹಿತಿ ಪಡೆದುಕೊಂಡಿದ್ದಾರೆ. ಬಳಿಕ, ಗ್ಲೋಬಲ್ ಹೆಡ್ ಆಫ್ ಪಲ್ಸಸ್ ಕಂಪನಿಯ ಮುಖ್ಯಸ್ಥ ವಿಲ್ ವಾಚರ್ನ್ ಅವರು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಕಾವೇರಿ ನಿವಾಸದಲ್ಲಿ ಭೇಟಿಯಾಗಿರಾಜ್ಯದಲ್ಲಿ ಹೂಡಿಕೆ ಬಗ್ಗೆ ಉತ್ಸುಕವಾಗಿರುವುದಾಗಿ ತಿಳಿಸಿದರು. ಈ ನಡುವೆ, ರಷ್ಯಾ ದೇಶದ ಭಾರತದ ರಾಯಬಾರಿ ಹೆಚ್.ಇ.ಡೇನಿಸ್ ಅಲಿಪೋವ್, ಮುಖ್ಯಮಂತ್ರಿ ಅವರನ್ನು ಕಾವೇರಿ ನಿವಾಸದಲ್ಲಿ ಭೇಟಿಯಾಗಿ ಚರ್ಚಿಸಿದರು.

<><><><>

ಗುಣಮಟ್ಟ ಮತ್ತು ವಿಶ್ವಾಸರ್ಹತೆ ಮೂಲಕ ವಿಶ್ವದಲ್ಲೇ ರಕ್ಷಣಾ ರಫ್ತಿನ ಆದ್ಯತೆಯ ಪಾಲುದಾರನಾಗಿ ಭಾರತ ಕಾರ್ಯನಿರ್ವಹಿಸುತ್ತಿದೆ ಎಂದು ರಕ್ಷಣಾ ಸಚಿವ ರಾಜನಾಥ್ ಸಿಂಗ್ ತಿಳಿಸಿದ್ದಾರೆ. ಏರೋ ಇಂಡಿಯಾ ೨೦೨೫ ರಲ್ಲಿ ಇಂದು ನಡೆದ ವಿವಿಧ ದೇಶಗಳ ರಕ್ಷಣಾ ಸಚಿವರ ಸಮ್ಮೇಳನದ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಹಿಂದೂಮಹಾಸಾಗರ ಪ್ರದೇಶದಲ್ಲಿ 'ಸಾಗರ್' ನೀತಿ ಮೂಲಕ ಭದ್ರತೆ, ಕಡಲುಗಳ್ಳತನ, ಭಯೋತ್ಪಾದನೆ, ಅನಿಯಂತ್ರಿತ ಮೀನುಗಾರಿಕೆ ಮತ್ತು ಹವಾಮಾನ ಸಂಬಂಧಿತ ಸವಾಲುಗಳನ್ನು ಎದುರಿಸುವಲ್ಲಿ ಭಾರತ ಕಟಿಬದ್ಧವಾಗಿದೆ. ಈ ಸಂದರ್ಭದಲ್ಲಿ ಜಾಗತಿಕ ಸಹಕಾರ ಅತ್ಯಗತ್ಯ ಎಂದು ಅವರು ಪ್ರತಿಪಾದಿಸಿದ್ದಾರೆ. ಭಾರತ ನವೀನ, ಸಮರ್ಥನೀಯ ಪರಿಹಾರಗಳನ್ನು ರೂಪಿಸುವಲ್ಲಿ ಎಲ್ಲ ರಾಷ್ಟ್ರಗಳೊಂದಿಗೆ ಒಟ್ಟಾಗಿ ಕೆಲಸ ಮಾಡಲು ಸದಾ ಬದ್ಧ ಎಂದು ಹೇಳಿದ್ದಾರೆ.

ಧ್ವನಿ : ರಾಜನಾಥ್ ಸಿಂಗ್ (೨೦ ಸೆಕೆಂಡ್ಸ್)

ಈ ನಡುವೆ ರಕ್ಷಣಾ ಖಾತೆ ರಾಜ್ಯ ಸಚಿವ ಸಂಜಯ್ ಸೇಠ್, ಇಟಲಿಯ ರಕ್ಷಣಾ ಖಾತೆ ಅಧೀನ ಕಾರ್ಯದರ್ಶಿ ಮ್ಯಾಟಿಯೊ ಪೆರೆಗೊ ಅವರೊಂದಿಗೆ ದ್ವಿಪಕ್ಷೀಯ ರಕ್ಷಣಾ ಸಹಕಾರದ ಅಭಿವೃದ್ಧಿಯ ಕುರಿತಂತೆ ಚರ್ಚೆ ನಡೆಸಿದ್ದಾರೆ.

ಬ್ರಿಟನ್ ರಕ್ಷಣಾ ಸಚಿವರೊಂದಿಗೆ ಭಾರತದ ರಕ್ಷಣಾ ಕಾರ್ಯದರ್ಶಿ ರಾಜೇಶ್ ಕುಮಾರ್ ಸಿಂಗ್, ದ್ವಿಪಕ್ಷೀಯ ರಕ್ಷಣಾ ಸಹಕಾರ ಕುರಿತಂತೆ ಮಾತುಕತೆ ನಡೆಸಿದ್ದಾರೆ. ಏರೋ ಇಂಡಿಯಾ

೨೦೨೫ರ ೨ನೇ ದಿನವಾದ ಇಂದು ಹಲವು ಯುದ್ಧ ವಿಮಾನಗಳು ಇಂದು ಬಾನಂಗಳದಲ್ಲಿ ತಮ್ಮ ಶಕ್ತಿ ಸಾಮರ್ಥ್ಯವನ್ನು ಪ್ರದರ್ಶಿಸಿದವು. ಮೇಕ್ ಇನ್ ಇಂಡಿಯಾ ಮೂಲಕ ಸ್ಥಳೀಯ ರಕ್ಷಣಾ ಉತ್ಪಾದನಾ ಸಾಮರ್ಥ್ಯ ಮತ್ತು ಅತ್ಯಾಧುನಿಕ ತಂತ್ರಜ್ಞಾನಗಳನ್ನು ಒಳಗೊಂಡ ರಕ್ಷಣಾ ಕ್ಷೇತ್ರಕ್ಕೆ ಸಂಬಂಧಿಸಿದ ಸಾರ್ವಜನಿಕ ಉದ್ದಿಮೆಗಳು, ನವೋದ್ಯಮಗಳು ತಮ್ಮ ತಂತ್ರಜ್ಞಾನವನ್ನು ಪ್ರದರ್ಶಿಸುವ ಮೂಲಕ ವಿಶ್ವದ ಗಮನ ಸೆಳೆಯುತ್ತಿವೆ.

<><><>

ಬೆಂಗಳೂರು-ಬೆಳಗಾವಿ ನಡುವೆ ವಂದೇ ಭಾರತ್ ರೈಲು ಸಂಚಾರ ಶೀಘ್ರ ಆರಂಭವಾಗುವ ನಿರೀಕ್ಷೆ ಇದೆ  ಎಂದು ಕೇಂದ್ರ ಸಚಿವ ಪ್ರಹ್ಲಾದ್ ಜೋಷಿ ತಿಳಿಸಿದ್ದಾರೆ. ನವದೆಹಲಿಯಲ್ಲಿ ನಿನ್ನೆ ಬೆಂಗಳೂರು-ಬೆಳಗಾವಿ ನಡುವೆ ವಂದೇ ಭಾರತ್ ರೈಲು ಸಂಚಾರ ಆರಂಭಿಸುವ ಕುರಿತು ಸಚಿವ ಅಶ್ವಿನಿ ವೈಷ್ಣವ್, ಬೆಳಗಾವಿ ಸಂಸದ ಜಗದೀಶ್ ಶೆಟ್ಟರ್ ಚರ್ಚಿಸಿದರು. ಈ ವೇಳೆ ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ಸಕಾರಾತ್ಮಕವಾಗಿ  ಸ್ಪಂದಿಸಿದ್ದಾರೆ. ಅತಿ ಶೀಘ್ರದಲ್ಲಿ ರೈಲು ಸಂಚಾರದ ವೇಳಾಪಟ್ಟಿಯನ್ನು ಬಿಡುಗಡೆ ಮಾಡಲಾಗುವುದು ಎಂದು ಸ್ಪಷ್ಟಪಡಿಸಿದ್ದಾರೆ.

<><><>

ಕೇಂದ್ರ ಸರ್ಕಾರ ರಾಜ್ಯದ ಶೇಂಗಾ ಬೆಳೆಗಾರರಿಗೆ ಸಿಹಿ ಸುದ್ದಿ ನೀಡಿದೆ. ಬೆಂಬಲ ಬೆಲೆಯಲ್ಲಿ ಶೇಂಗಾ ಖರೀದಿ ಅವಧಿ ವಿಸ್ತರಿಸಿ ಆದೇಶ ನೀಡಿದೆ. ರಾಜ್ಯದಲ್ಲಿ ಈ ಬಾರಿ ಅಧಿಕ ಪ್ರಮಾಣದಲ್ಲಿ ಶೇಂಗಾ ಬೆಳೆದ ಹಿನ್ನೆಲೆಯಲ್ಲಿ ಬೆಂಬಲ ಬೆಲೆ ಘೋಷಿಸಿ ರೈತರಿಗೆ ನೆರವಾಗಿದ್ದ ಕೇಂದ್ರ ಸರ್ಕಾರ, ಈಗ ಮತ್ತೆ ಖರೀದಿ ಅವಧಿ ವಿಸ್ತರಿಸಿದೆ ಎಂದು  ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ರೈತರ ಹಿತದೃಷ್ಟಿಯಿಂದ ಬೆಂಬಲ ಬೆಲೆ ಖರೀದಿಯ ಕಾಲಮಿತಿ ಹೆಚ್ಚಿಸುವಂತೆ ಕೇಂದ್ರ ಕೃಷಿ ಸಚಿವರಲ್ಲಿ ಪ್ರಲ್ಹಾದ್ ಜೋಶಿ ಮನವಿ ಮಾಡಿದ್ದರು.  ಸಚಿವರ ಮನವಿ ಮೇರೆಗೆ ಕೇಂದ್ರ ಸರ್ಕಾರ ಬೆಂಬಲ ಬೆಲೆಯಲ್ಲಿ ಶೇಂಗಾ ಖರೀದಿ ಪ್ರಕ್ರಿಯೆಯನ್ನು ಇದೇ ೧೫ರವರೆಗೆ ವಿಸ್ತರಿಸಿ ಆದೇಶ ಹೊರಡಿಸಿದೆ. ಕೇಂದ್ರ ಸರ್ಕಾರ ರಾಜ್ಯದಿಂದ ಈ ಬಾರಿ ಒಟ್ಟು ೫೭ ಸಾವಿರದ ೭೦೩ ಮೆಟ್ರಿಕ್ ಟನ್ ಶೇಂಗಾವನ್ನು ಬೆಂಬಲ ಬೆಲೆಯಲ್ಲಿ ಖರೀದಿಸಲಿದೆ ಎಂದು ಸಚಿವ ಪ್ರಲ್ಹಾದ್ ಜೋಶಿ ತಿಳಿಸಿದ್ದಾರೆ.

<><><>

ಮಹಾ ಕುಂಭಮೇಳ ನಡೆಯುತ್ತಿರುವ ಹಿನ್ನೆಲೆಯಲ್ಲಿ ಪ್ರಯಾಗ್‌ರಾಜ್ ನಿಲ್ದಾಣ ಅಥವಾ ಪ್ರಯಾಗ್‌ರಾಜ್ ಹತ್ತಿರದ ನಿಲ್ದಾಣಗಳಲ್ಲಿ ಹೆಚ್ಚಿನ ಜನಸಂದಣಿ ಇರುವುದರಿಂದ ಅವುಗಳನ್ನು ಮುಚ್ಚಲಾಗಿದೆ ಎಂಬುದು ಸುಳ್ಳು ಸುದ್ದಿಯಾಗಿದೆ  ಎಂದು ನೈರುತ್ಯ ರೈಲ್ವೆ ಇಲಾಖೆಯ ಮುಖ್ಯ

ಸಾರ್ವಜನಿಕ ಸಂಪರ್ಕ ಅಧಿಕಾರಿ ಡಾ. ಮಂಜುನಾಥ ಕನಮಡಿ ತಿಳಿಸಿದ್ದಾರೆ. ಪ್ರಯಾಗ್‌ರಾಜ್ ಮತ್ತು ಸುತ್ತಮುತ್ತಲಿನ ಪ್ರದೇಶದಲ್ಲಿ ಎಂಟು ನಿಲ್ದಾಣಗಳು ಪ್ರಯಾಗ್‌ರಾಜ್ ಕುಂಭಮೇಳಕ್ಕೆ ಸೇವೆ ಸಲ್ಲಿಸುತ್ತಿವೆ. ಎಲ್ಲಾ ರೈಲುಗಳು ವೇಳಾಪಟ್ಟಿಯ ಪ್ರಕಾರ ಚಲಿಸುತ್ತಿದ್ದು ಸಾರ್ವಜನಿಕರು ಭಯಭೀತರಾಗಬೇಡಿ ಎಂದು ಮನವಿ ಮಾಡಿದ್ದಾರೆ.

ಧ್ವನಿ : ಮುಖ್ಯ ಸಾರ್ವಜನಿಕ ಸಂಪರ್ಕ ಅಧಿಕಾರಿ ಡಾ. ಮಂಜುನಾಥ ಕನಮಡಿ (೩೮ ಸೆಕೆಂಡ್ಸ್)

<><><>

ಯಾದಗಿರಿ ಜಿಲ್ಲೆಯ ಶಹಾಪುರ ನಗರಕ್ಕೆ ಒಳಚರಂಡಿ ಯೋಜನೆ ಕಲ್ಪಿಸುವ ಹಾಗೂ ಐದು ವರ್ಷ ನಿರ್ವಹಣೆಗೆ ೧೯೭ ಕೋಟಿ ರೂಪಾಯಿ ವೆಚ್ಚದ ಕಾಮಗಾರಿಗೆ ಟೆಂಡರ್ ಪ್ರಕ್ರಿಯೆ ಶುರುವಾಗಿದೆ ಎಂದು ಯಾದಗಿರಿ ಜಿಲ್ಲಾ ಉಸ್ತುವಾರಿ ಸಚಿವ ಶರಣಬಸಪ್ಪ ದರ್ಶನಾಪುರ ತಿಳಿಸಿದ್ದಾರೆ. ಯಾದಗಿರಿ ಜಿಲ್ಲೆಯ ಶಹಾಪುರ ನಗರದಲ್ಲಿ ಸುದ್ದಿಗಾರರಿಗೆ ಮಾಹಿತಿ ನೀಡಿದ ಅವರು, ಈ ಯೋಜನೆ ಅನುಷ್ಠಾನದಿಂದ ನಗರದ ೧೩ ಸಾವಿರದ ೪೨೫ ಮನೆಗಳಿಗೆ ಒಳಚರಂಡಿ ಗೃಹ ಸಂಪರ್ಕ ಕಲ್ಪಿಸಲಾಗುವುದು. ಒಟ್ಟು ೧೪೩ ಕಿಲೊಮೀಟರ್ ಒಳಚರಂಡಿ ಜಾಲ ನಿರ್ಮಿಸಲು ಉದ್ದೇಶಿಸಲಾಗಿದೆ ಎಂದು ತಿಳಿಸಿದ್ದಾರೆ.

<><><>

ಹಾವೇರಿ ಜಿಲ್ಲೆಯ ರಾಣೆಬೇನ್ನೂರು ತಾಲೂಕು ಗುಡಗೂರು ಕ್ರಾಸ್ ನಲ್ಲಿಂದು ಬೆಳಗಿನ ಜಾವ ಸಂಭವಿಸಿದ ಭೀಕರ ರಸ್ತೆ ಅಪಘಾತದಲ್ಲಿ ಹನುಮನಮಟ್ಟಿ ಕೃಷಿ ವಿಶ್ವವಿದ್ಯಾಲಯದ ಮೂವರು ವಿದ್ಯಾರ್ಥಿಗಳು ಮೃತಪಟ್ಟಿದ್ದಾರೆ. ಗುಡಗೂರು ಬಳಿ ಮೈಲಾರ ಜಾತ್ರೆಗೆ ಹೊರಟಿದ್ದ ಎತ್ತಿನ ಬಂಡಿಗೆ ಬೈಕ್ ಡಿಕ್ಕಿಯಾಗಿ ಮೂವರು ವಿದ್ಯಾರ್ಥಿಗಳು ಸಾವನ್ನಪ್ಪಿದ್ದಾರೆ. ಸ್ಥಳಕ್ಕೆ ರಾಣೆಬೇನ್ನೂರು ಗ್ರಾಮೀಣ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

<><><>

ಕೈಗಾರಿಕೆ, ಮೂಲಸೌಕರ್ಯ ಅಭಿವೃದ್ಧಿ, ಗಣಿಗಾರಿಕೆ, ಮನರಂಜನೆ ಯೋಜನೆಗಳಲ್ಲಿನ ಅಂತರ್ಜಲ ಬಳಕೆಗೆ ಅಂತರ್ಜಲ ಪ್ರಾಧಿಕಾರದಿಂದ ನಿರಾಪೇಕ್ಷಣಾ ಪತ್ರವನ್ನು ಕಡ್ಡಾಯವಾಗಿ ಪಡೆಯಬೇಕೆಂದು ಜಿಲ್ಲಾ ಅಂತರ್ಜಲ ಪ್ರಾಧಿಕಾರದ ಅಧ್ಯಕ್ಷ ಡಾ. ಗಂಗಾಧರಸ್ವಾಮಿ ತಿಳಿಸಿದ್ದಾರೆ. ದಾವಣಗೆರೆ ಜಿಲ್ಲೆಯಲ್ಲಿ ಪ್ರಸ್ತುತ ಇರುವ ಹಾಗೂ ಹೊಸದಾಗಿ ಪ್ರಾರಂಭಿಸುವ ಕೈಗಾರಿಕೆ, ಮೂಲ ಸೌಕರ್ಯ ಅಭಿವೃದ್ಧಿ, ಗಣಿಗಾರಿಕೆ, ಮನರಂಜನೆ ಯೋಜನೆಗಳಲ್ಲಿನ ಅಂತರ್ಜಲ ಬಳಕೆದಾರರು ಕಡ್ಡಾಯವಾಗಿ ನಿರಾಪೇಕ್ಷಣಾ ಪತ್ರವನ್ನು ಕರ್ನಾಟಕ ಅಂತರ್ಜಲ ಪ್ರಾಧಿಕಾರದಿಂದ ಪಡೆಯಬೇಕು

ಎಂದು ಸೂಚಿಸಿದ್ದಾರೆ. ಹೆಚ್ಚಿನ ಮಾಹಿತಿಗಾಗಿ ಹಿರಿಯ ಭೂವಿಜ್ಞಾನಿ, ಜಿಲ್ಲಾ ಅಂತರ್ಜಲ ಕಚೇರಿ, ವಿದ್ಯಾನಗರ, ದಾವಣಗೆರೆ ಇವರನ್ನು ಸಂಪರ್ಕಿಸಲು ತಿಳಿಸಲಾಗಿದೆ.

<><><><>

ಸಂಕ್ಷಿಪ್ತ ಸುದ್ದಿಗಳು

1. ದಾವಣಗೆರೆ ಜಿಲ್ಲೆ ನ್ಯಾಮತಿ ತಾಲ್ಲೂಕಿನ ಸೂರಗೊಂಡನಕೊಪ್ಪದ ಭಾಯಗಾಡ್‌ನಲ್ಲಿ ಸಂತ ಸೇವಾಲಾಲ್‌ರವರ ೨೮೬ನೇ ಜಯಂತೊತ್ಸವ ಹಾಗೂ ವಿವಿಧ ಕಟ್ಟಡಗಳ ಉದ್ಘಾಟನಾ ಕಾರ್ಯಕ್ರಮಕ್ಕೆ ಅಗತ್ಯ ಸಿದ್ಧತೆಗಳನ್ನು ಮಾಡಿಕೊಳ್ಳಲಾಗಿದ್ದು, ಇದೇ ೧೪ ರಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಕಾರ್ಯಕ್ರಮಕ್ಕೆ ಚಾಲನೆ ನೀಡಲಿದ್ದಾರೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>